# ಕರ್ನಾಟಕ ವಿಧಾನಸಭೆ

## ಹದಿನೈದನೇ ವಿಧಾನಸಭೆ

### ಲಘು ಪ್ರಕಟಣೆ ಭಾಗ-2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದಂತೆ ಸಾಮಾನ್ಯ ಮಾಹಿತಿ)

**ಶುಕ್ರವಾರ, ದಿನಾಂಕ 03ನೇ ಡಿಸೆಂಬರ್, 2021**

**ಸಂಖ್ಯೆ: 220**

**ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನದ ಸಂಬಂಧ ಮಾನ್ಯ ವಿಧಾನಸಭಾ ಸದಸ್ಯರುಗಳ ಮಾಹಿತಿಗಾಗಿ**

1. 15ನೇ ವಿಧಾನಸಭೆಯ 11ನೇ ಅಧಿವೇಶನವು ದಿನಾಂಕ 13ನೇ ಡಿಸೆಂಬರ್ 2021 ರಿಂದ 24ನೇ ಡಿಸೆಂಬರ್ 2021ರವರೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯಲಿರುವುದರಿಂದ ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆ ನಿಯಮಾವಳಿಗಳ ನಿಯಮ 2ರಂತೆ ವಿಧಾನಸಭೆ ಸಚಿವಾಲಯವು ದಿನಾಂಕ 11ನೇ ಡಿಸೆಂಬರ್ 2021ರಿಂದ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಕಾರ್ಯನಿರ್ವಹಿಸಲಿದೆ.

2. ಅಧಿವೇಶನದಲ್ಲಿ ಪಾಲ್ಗೊಳ್ಳುವ ಮಾನ್ಯ ಸದಸ್ಯರುಗಳ ಜೊತೆಯಲ್ಲಿ ಆಗಮಿಸುವ ಆಪ್ತ ಸಹಾಯಕರುಗಳು ಹಾಗೂ ವಾಹನ ಚಾಲಕರುಗಳಿಗೆ ಬೆಳಗಾವಿಯಲ್ಲಿ ವಸತಿ ಹಾಗೂ ಸಾರಿಗೆ ಸೌಕರ್ಯವನ್ನು ಮಾನ್ಯ ಸದಸ್ಯರುಗಳೇ ಈ ಹಿಂದಿನಂತೆ ತಮ್ಮ ಹಂತದಲ್ಲಿಯೇ ವ್ಯವಸ್ಥೆ ಮಾಡಿಕೊಳ್ಳಲು ಕೋರಲಾಗಿದೆ.

3. ಅಧಿವೇಶನದ ಸಮಯದಲ್ಲಿ ಮಾನ್ಯ ಸದಸ್ಯರುಗಳಿಗೆ ಬೆಳಗಿನ ಉಪಹಾರವನ್ನು ಅವರುಗಳು ವಾಸ್ತವ್ಯ ಹೂಡಲಿರುವ ಹೋಟೆಲ್‌ಗಳಲ್ಲಿಯೇ ವ್ಯವಸ್ಥೆ ಮಾಡಲಾಗಿದ್ದು, ಮಧ್ಯಾಹ್ನದ ಊಟದ ವ್ಯವಸ್ಥೆಯನ್ನು ಸುವರ್ಣ ವಿಧಾನಸೌಧದಲ್ಲಿ ಏರ್ಪಡಿಸಲಾಗಿರುತ್ತದೆ. ರಾತ್ರಿ ಊಟದ ವ್ಯವಸ್ಥೆಯನ್ನು ಈ ಹಿಂದಿನಂತೆ ಮಾನ್ಯ ಸದಸ್ಯರುಗಳೇ ಮಾಡಿಕೊಳ್ಳಲು ಕೋರಲಾಗಿದೆ.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ),
ಕರ್ನಾಟಕ ವಿಧಾನಸಭೆ.

ವಿಧಾನಸಭೆಯ ಎಲ್ಲಾ ಮಾನ್ಯ ಸದಸ್ಯರುಗಳಿಗೆ.